All India Radio: Bangalore
Regional Bulletin In Kannada

15.05.2025 6.40 P.M.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<><><><>

ಮುಖ್ಯಾಂಶಗಳು

- ಮುಖ್ಯಮಂತ್ರಿ ಸಿದ್ಧರಾಮಯ್ಯ ಅಧ್ಯಕ್ಷತೆಯಲ್ಲಿ ರಾಜ್ಯ ನೀತಿ ಹಾಗೂ ಯೋಜನಾ ಆಯೋಗ ಹಾಗೂ ಅಭಿವೃದ್ಧಿ ಸಮಿತಿಯ ಜಂಟಿಸಭೆ
- ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆಗೆ ರಾಜ್ಯಪಾಲರ ಅಂಕಿತ ಇಂದಿನಿಂದ ಬಿಬಿಎಂಪಿ ಬದಲು ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆ
- ಕೃಷಿಕ್ಷೇತ್ರದಲ್ಲಿ ತಾಂತ್ರಿಕ ಆವಿಷ್ಕಾರಗಳನ್ನು ಅಳವಡಿಸಿಕೊಳ್ಳುವಲ್ಲಿ ಭಾರತ ಮುಂಚೂಣಿಯಲ್ಲಿದೆ-ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್
- ವೀರಸೇನಾನಿಗಳಿಗೆ ಕೃತಜ್ಞತೆ ಸಲ್ಲಿಸಿದ ತಿರಂಗ ಯಾತ್ರೆ - ಬೃಹತ್ ತ್ರಿವರ್ಣ ಧ್ವಜದಡಿ ಒಗ್ಗೂಡಿದ ಜನತೆ
- ನಕ್ಸಲ್ ನಾಯಕ ಬಿ.ಜಿ.ಕೃಷ್ಣಮೂರ್ತಿ ಬಾಡಿ ವಾರೆಂಟ್ ಮೇಲೆ ನ್ಯಾಯಾಧೀಶರ ಮುಂದೆ ಹಾಜರು

<><><><>

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗ ಹಾಗೂ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಜಂಟಿ ಸಭೆ ನಡೆಯಿತು. ವಿಕೇಂದ್ರೀಕರಣದಲ್ಲಿ ಜನರ ಒಳಗೊಳ್ಳುವಿಕೆ ಮುಖ್ಯ . ಜನರ ಅಭಿಪ್ರಾಯಗಳಿಗೆ ಮನ್ನಣೆ ನೀಡಬೇಕು. ಯೋಜನಾ ಮತ್ತು ಅಭಿವೃದ್ಧಿ ಸಮಿತಿಗಳು ಬಜೆಟ್ ಮಂಡನೆಗೆ ಪೂರ್ವದಲ್ಲಿ ಸಭೆ ಕರೆದು ಅಭಿಪ್ರಾಯಗಳನ್ನು ಚರ್ಚಿಸಬೇಕು ರಾಜ್ಯದ ನೀತಿ ಆಯೋಗದ ಉಪಾಧ್ಯಕ್ಷರು ನಿಯಮಿತವಾಗಿ ರಾಜ್ಯ ಪ್ರವಾಸ ಮಾಡಬೇಕು ಎಂದು ಸೂಚಿಸಿದರು. ನೀತಿ ಯೋಜನೆ ಸಮಿತಿಗಳ ಆಯ್ಕೆ ಕಾಲಕಾಲಕ್ಕೆ ಆಗುವ ಕುರಿತಂತೆ ಹಾಗೂ ಸಭೆಗಳು ನಿಯಮಿತವಾಗಿ ನಡೆಯಲು ಅಧಿಕಾರಿಗಳು ಕ್ರಮ ವಹಿಸಬೇಕು ಎಂದರು. ಮೂರು ತಿಂಗಳಿಗೊಮ್ಮೆ ಕಡ್ಡಾಯವಾಗಿ ಸಭೆ ನಡೆಯಬೇಕು. ಇದಕ್ಕೆ ಸೂಕ್ತ ಕ್ರಮ ಕೈಗೊಳ್ಳಲಾಗುವಂತೆ ಜಿಲ್ಲಾಧಿಕಾರಿಗಳು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ತಿಳಿಸಿದರು. ತಾಲ್ಲೂಕು, ಜಿಲ್ಲಾ ಮಟ್ಟದ ಸಮಿತಿಯ ಶಿಫಾರಸುಗಳನ್ನು ಗಮನಕ್ಕೆ ತಂದು ಬಜೆಟ್ ಪೂರ್ವ ಸಭೆಗಳಲ್ಲಿ ಮಂಡಿಸಬೇಕು. ಸಂವಿಧಾನದನ್ವಯ ಗ್ರಾಮ, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮೀಸಲಾತಿ ಸರಿಯಾಗಿ ಪಾಲನೆ ಆಗುತ್ತಿಲ್ಲ ಈ ಬಗ್ಗೆ ಪರಿಶೀಲಿಸಿ ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು. ಸ್ಥಳೀಯ ಸಂಸ್ಥೆಗಳ ಆರ್ಥಿಕ ಸಹಾಯ ಒದಗಿಸಲು ಹಣಕಾಸು ಆಯೋಗದ ಅಧ್ಯಕ್ಷರಾದ ಸಿ ನಾರಾಯಣಸ್ವಾಮಿ ಅವರು ವರದಿಯನ್ನು ನೀಡಿದ್ದು ಅದರ ಜಾರಿಗೆ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

<><><><>

ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆಗೆ ರಾಜ್ಯಪಾಲರ ಅಂಕಿತ ದೊರೆತಿದ್ದು, ಇಂದಿನಿಂದ ಜಾರಿಯಾಗಲಿದೆ. ಬಿಬಿಎಂಪಿ ಬದಲು ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಯಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಇನ್ನು ಮುಂದೆ ಬೆಂಗಳೂರು ಗ್ರೇಟರ್ ಬೆಂಗಳೂರು ಆಗಲಿದೆ. ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿ ಕನಿಷ್ಠ ಮೂರು ಪಾಲಿಕೆ ರಚನೆಯಾಗುವ ಸಾಧ್ಯತೆಯಿದೆ. ರಾಜ್ಯದ ಮುಖ್ಯಮಂತ್ರಿಗಳು ಪ್ರಾಧಿಕಾರದ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಲಿದ್ದು, ಮುಂದಿನ ದಿನಗಳಲ್ಲಿ ಈ ಬಗ್ಗೆ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಎಂದರು. ರಾಜ್ಯದಲ್ಲಿ ಮಳೆಯಿಂದಾಗಿ ಅನಾಹುತಗಳು ನಡೆಯುತ್ತಿದ್ದು, ಈ ಬಗ್ಗೆ ಸರ್ಕಾರದ ಕ್ರಮದ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿ, ಮಳೆಯಿಂದಾಗಿ ಸಂಭವಿಸುವ ಅನಾಹುತಗಳಿಗೆ ಪರಿಹಾರ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

<><><><>

'ಕೃಷಿ ಕ್ಷೇತ್ರದಲ್ಲಿ ತಾಂತ್ರಿಕ ಆವಿಷ್ಕಾರಗಳನ್ನು ಅಳವಡಿಸಿಕೊಳ್ಳುವಲ್ಲಿ ಭಾರತವು ಮುಂಚೂಣಿಯಲ್ಲಿದೆ. ಪ್ರಸ್ತುತ ಕೃಷಿ ಉತ್ಪಾದನೆಯ ಬೇಡಿಕೆಯನ್ನು ಪೂರೈಸಲು ಹೊಸ ಆಯ್ಕೆಗಳನ್ನು ಉತ್ತೇಜಿಸುವ ಅವಶ್ಯಕತೆಯಿದೆ. ಕಡಿಮೆ ಭೂಮಿಯಲ್ಲಿ ಹೆಚ್ಚು ಇಳುವರಿ ನೀಡಲು ಲಂಬ ಕೃಷಿ ತಂತ್ರಜ್ಞಾನದಲ್ಲಿ ಹೆಚ್ಚಿನ ಕೆಲಸ ಅಗತ್ಯವಿದೆ" ಎಂದು ಕರ್ನಾಟಕದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಅಭಿಪ್ರಾಯಪಟ್ಟರು. ಬೆಂಗಳೂರಿನ ಕೃಷಿ ವಿಶ್ವವಿದ್ಯಾಲಯದ ೫೯ನೇ ಘಟಿಕೋತ್ಸವ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು "ಭಾರತೀಯ ಕೃಷಿ ಸಂಶೋಧನಾ ಮಂಡಳಿ ಮತ್ತು ರಾಜ್ಯ ಕೃಷಿ ವಿಶ್ವವಿದ್ಯಾಲಯಗಳು ಅಭಿವೃದ್ಧಿಪಡಿಸಿದ ಸುಧಾರಿತ ಬೀಜಗಳು ಮತ್ತು ಸುಧಾರಿತ ತಳಿಗಳು ರೈತರ ಆದಾಯವನ್ನು ಹೆಚ್ಚಿಸುವಲ್ಲಿ ಸಹಾಯಕವಾಗಿವೆ. ಕೃಷಿ ಕ್ಷೇತ್ರದಲ್ಲಿ ಡಿಜಿಟಲ್ ತಂತ್ರಜ್ಞಾನ ಅಳವಡಿಸಿಕೊಳ್ಳಬೇಕು. ಡ್ರೋನ್ ತಂತ್ರಜ್ಞಾನ, ಉಪಗ್ರಹ ಚಿತ್ರಣ ಮತ್ತು ಸ್ಮಾರ್ಟ್ ನೀರಾವರಿ ವ್ಯವಸ್ಥೆಗಳ ಬಳಕೆಯು ಉತ್ಪಾದನೆಯನ್ನು ಹೆಚ್ಚಿಸಲು ಮತ್ತು ನೀರಿನ ಬಳಕೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ" ಎಂದರು.

ಸಮಾರಂಭದಲ್ಲಿ ಸಚಿವರಾದ ಎನ್.ಚಲುವನಾರಾಯಣಸ್ವಾಮಿ, ನವದೆಹಲಿ ಇಫ್ಕೋ ವ್ಯವಸ್ಥಾಪಕ ನಿರ್ದೇಶಕರಾದ ಡಾ.ಯು.ಎಸ್.ಅವಸ್ಥಿ, ಕುಲಪತಿ ಡಾ.ಎಸ್.ವಿ.ಸುರೇಶ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><><><>

ನಗರದಲ್ಲಿ ಇಂದು ನಡೆದ ತಿರಂಗ ಯಾತ್ರೆಯು ವೀರಸೇನಾನಿಗಳಿಗೆ ಧನ್ಯವಾದವನ್ನು ಸಲ್ಲಿಸಿತು. ನಗರದ ಮಲ್ಲೇಶ್ವರ ಮಂತ್ರಿಮಾಲ್‌ನ ಸಂಪಿಗೆ ರಸ್ತೆಯ ಸಿರೂರು ಆಟದ ಮೈದಾನದಿಂದ ಮಲ್ಲೇಶ್ವರ ೧೮ನೇ ಕ್ರಾಸ್‌ನವರೆಗೂ ನಡೆದ ಯಾತ್ರೆಯಲ್ಲಿ ನೂರಾರು ನಾಯಕರು, ಬೆಂಗಳೂರಿನ ನಾಗರೀಕರು, ಶಾಲಾ-ಕಾಲೇಜಿನ ವಿದ್ಯಾರ್ಥಿಗಳು ಮತ್ತು ಮಹಿಳೆಯರು ಸೇರಿದಂತೆ ಸಾವಿರಾರು ಮಂದಿ ಪಾಲ್ಗೊಂಡಿದ್ದರು. ಬೃಹತ್ ತ್ರಿವರ್ಣ ಧ್ವಜದಡಿ ಜನತೆ ಸೇರಿ ಸೇನಾ ಕಾರ್ಯಾಚರಣೆಗೆ ಬೆಂಬಲ ಸೂಚಿಸಿದರು. ನಿವೃತ್ತ ಏರ್ ಮಾರ್ಷಲ್ ಎ.ವಿ. ಮುರುಳಿ ಅವರು ಮಾತನಾಡಿ, ಆಪರೇಷನ್ ಸಿಂದೂರ್ ಮುಗಿದಿಲ್ಲ. ಇನ್ನೊಮ್ಮೆ ನಡೆದರೆ ಪಾಕಿಸ್ತಾನ ನಿರ್ನಾಮವಾಗಲಿದೆ. ಪಿಒಕೆ ನಮ್ಮದಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಪಾಕಿಸ್ತಾನಕ್ಕೆ ಬುದ್ಧಿ ಕಲಿಸಬೇಕೆಂಬುದು ದೇಶದ ನಿಲುವಾಗಿತ್ತು. ಪ್ರಧಾನಿಯವರು ರಾಜಕೀಯ ಇಚ್ಛಾಶಕ್ತಿ ಪ್ರದರ್ಶಿಸಿದರು ಎಂದು ಮೆಚ್ಚುಗೆ ಸೂಚಿಸಿದರು. ಜನರು ಬಯಸಿದ್ದನ್ನು ನಾವು ಮಾಡಿ ತೋರಿಸಿದೆವು. ಸೈನಿಕರ ಹಿಂದೆ ಇಡೀ ರಾಷ್ಟ್ರ ನಿಂತಿತ್ತು ಎಂದರು. ಪಾಕಿಸ್ತಾನಕ್ಕೆ ಮಹಿಳೆಯರು ಸಮರ್ಥ ಉತ್ತರ ನೀಡಿದ್ದಾರೆ ಎಂದು ವಿವರಿಸಿದರು. ಕರ್ನಾಟಕ ರಾಜ್ಯ ಉಸ್ತುವಾರಿ ಮತ್ತು ರಾಜ್ಯಸಭಾ ಸದಸ್ಯ ಡಾ. ರಾಧಾಮೋಹನ್ ದಾಸ್ ಅಗ್ರವಾಲ್, ರಾಜ್ಯ ಸಹ-ಉಸ್ತುವಾರಿ ಸುಧಾಕರ್ ರೆಡ್ಡಿ, ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಉಪಮುಖ್ಯಮಂತ್ರಿ ಮತ್ತು ಶಾಸಕ ಡಾ.ಸಿ.ಎನ್.ಅಶ್ವತ್ಥನಾರಾಯಣ್, ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್,

ಸಂಸದ ಪಿ.ಸಿ. ಮೋಹನ್, ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ, ಶಾಸಕ ಎನ್. ಮುನಿರತ್ನ, ಎಸ್. ಮುನಿರಾಜು, ಮಾಜಿ ಸಂಸದ ಎಸ್. ಮುನಿಸ್ವಾಮಿ, ನಿವೃತ್ತ ಏರ್ ಮಾರ್ಷಲ್ ಎ.ವಿ. ಮುರುಳಿ, ಖ್ಯಾತ ವಕೀಲೆ ಶ್ರೀಮತಿ ಕ್ಷಮಾ ನರಗುಂದ, ಸ್ತ್ರೀ ಜಾಗೃತಿ ಪತ್ರಿಕೆಯ ಸಂಪಾದಕಿ ಶ್ರೀಮತಿ ಹೆಚ್.ಜಿ. ಶೋಭಾ, ಪಕ್ಷದ ಮುಖಂಡರು, ಕಾಲೇಜು ವಿದ್ಯಾರ್ಥಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

<><><>

ಪಹಲ್ಗಾಮ್‌ನಲ್ಲಿ  ದಾಳಿ ಮಾಡಿದ ಉಗ್ರರ ನೆಲೆಗಳನ್ನು ನಾಶ ಮಾಡಿ, ದೇಶದ ಮೇಲೆ ಆಕ್ರಮಣ ಮಾಡುವ ಯಾವುದೇ ಶಕ್ತಿಗಳ ದಮನ ಮಾಡಲು ಸಿದ್ಧವಾಗಿರುವ ಭಾರತೀಯ ಸೈನಿಕರ ಧೈರ್ಯ, ಸ್ಥೈರ್ಯ ಕಾರ್ಯಕ್ಷಮತೆ ಬಗ್ಗೆ ದೇಶದಲ್ಲಿ ಅಭಿಮಾನದ ಮಹಾಪೂರವೇ ಹರಿದು ಬರುತ್ತಿದೆ. ಜನ ಸಾಮಾನ್ಯರೊಂದಿಗೆ, ಹಿರಿಯ ಸೈನಿಕರು, ಎನ್ ಸಿ ಸಿ ದಳ ಸೇರಿದಂತೆ ಪ್ರಭಾವಿ ವ್ಯಕ್ತಿಗಳು, ದೇಶದ ಸೈನಿಕರನ್ನು ಬೆಂಬಲಿಸಿ ಮೆಚ್ಚುಗೆಯ ನುಡಿಗಳನ್ನಾಡುತ್ತಿದ್ದಾರೆ. ಈ ದಿಸೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ಎನ್.ಸಿ.ಸಿ ಅಧಿಕಾರಿ ಕ್ಯಾಪ್ಟನ್ ಎನ್.ಶ್ರೀನಿವಾಸ್ ಆಕಾಶವಾಣಿ ಯೊಂದಿಗೆ ತಮ್ಮ ಅಭಿಪ್ರಾಯ ಹಂಚಿಕೊಂಡಿದ್ದಾರೆ.

ಬೈಟ್ : ಎನ್.ಸಿ.ಸಿ ಅಧಿಕಾರಿ ಕ್ಯಾಪ್ಟನ್ ಎನ್.ಶ್ರೀನಿವಾಸ್

<><><>

ಶಿವಮೊಗ್ಗದ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಲಯದಲ್ಲಿ ನಕ್ಸಲ್ ನಾಯಕ ಬಿ.ಜಿ ಕೃಷ್ಣ ಮೂರ್ತಿ ಅವರನ್ನು ಆಗುಂಬೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಾಡಿ ವಾರೆಂಟ್ ಮೇಲೆ ಕರೆತಂದು ನ್ಯಾಯಾಧೀಶರ ಮುಂದೆ ಹಾಜರುಪಡಿಸಲಾಯಿತು. ಆಗುಂಬೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಮೂರು ಕೇಸ್ ದಾಖಲಾಗಿತ್ತು. ೨೦೦೯ ರಲ್ಲಿ  ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಸ್ಫೋಟ, ಅರುಣ್ ಕುಮಾರ್ ಮನೆ ಮೇಲೆ ದಾಳಿ, ೨೦೦೭ ರಲ್ಲಿ ಸುರೇಶ್ ನಾಯಕ ಬಂಧನದ ವೇಳೆ ನೆಕ್ಕರಕೆ ಕಾಡಲ್ಲಿ ಸ್ಫೋಟಕ ವಸ್ತು ಪತ್ತೆ ಪ್ರಕರಣದಲ್ಲಿ ಬಿ.ಜಿ.ಕೃಷ್ಣಮೂರ್ತಿ ಅವರು ಆರೋಪಿಯಾಗಿದ್ದರು. ಸಾಕ್ಷಿಗಳ ವಿಚಾರಣೆ ಮುಗಿದು ಆರೋಪಿ ಹೇಳಿಕೆಗೆ ಕರೆತರಲಾಗಿದೆ. ಈ ವೇಳೆ ನ್ಯಾಯಾಧೀಶರು ಸ್ಫೋಟಕ ಹಾಗೂ ಗನ್ ಗಳ ಬಳಕೆ ಕುರಿತು ಪ್ರಶ್ನಿಸಿದ್ದಾರೆ. ಇವುಗಳನ್ನು ಬಿ.ಜಿ.ಕೃಷ್ಣಮೂರ್ತಿ ಅಲ್ಲಗೆಳೆದಿದ್ದಾರೆ.

<><><>

ರಾಯಚೂರು  ಸಂಸದ  ಜಿ ಕುಮಾರ ನಾಯಕ್ ಅವರು ಕೇಂದ್ರ ರೈಲ್ವೆ ಸಚಿವರನ್ನು  ಭೇಟಿಮಾಡಿ ತ್ವರಿತವಾಗಿ ಅನುಮೋದನೆ ನೀಡುವಂತೆ ಒತ್ತಾಯಿಸಿದ್ದರ ಪರಿಣಾಮ ಆಲಮಟ್ಟಿ ಯಾದಗಿರಿ ನಡುವಿನ ೧೬೨ ಕಿಮೀ ಉದ್ದದ ನೂತನ ರೈಲು ಮಾರ್ಗದ ಅಂತಿಮ  ಸರ್ವೆ ಕಾರ್ಯ ಮಾಡಲು ೪.೦೫ ಕೋಟಿ ಮಂಜೂರಾಗಿದೆ.  ಈ ಯೋಜನೆಯು ವಿಶೇಷವಾಗಿ ಆಲಮಟ್ಟಿ-ಹುಣಸಿಗಿ-ಯಾದಗಿರಿ ಭಾಗದ  ಜನರ ಬಹುಕಾಲದ ಬೇಡಿಕೆಯಾಗಿತ್ತು, ಇದರಿಂದ ಸಂಪರ್ಕವನ್ನು ಸುಧಾರಿಸಲು ಮತ್ತು ಆರ್ಥಿಕ ಸಾಮರ್ಥ್ಯವನ್ನು ಮತ್ತಷ್ಟು ದೃಢಪಡಿಸುವ ನಿಟ್ಟಿನಲ್ಲಿ ಇದು ಮಹತ್ವದ ಹೆಜ್ಜೆಯಾಗಿದೆ.ಇದು ಪ್ರಾದೇಶಿಕ ಅಭಿವೃದ್ಧಿ ಮತ್ತು ಸಮಗ್ರ ಬೆಳವಣಿಗೆಗೆ ದೊಡ್ಡ ಉತ್ತೇಜನವಾಗಿದೆ. ರೈಲ್ವೆ ಸಚಿವಾಲಯವು ತ್ವರಿತವಾಗಿ ಸ್ಪಂದಿಸಿದ್ದಕ್ಕಾಗಿ ಸಂಸದ ಜಿ ಕುಮಾರ ನಾಯಕರವರು ಯಾದಗಿರಿ ಜಿಲ್ಲೆಯ ಪರವಾಗಿ ಕೃತಜ್ಞತೆಗಳನ್ನು ತಿಳಿಸಿದರು.

<><><>

ಕೋಲಾರ ಜಿಲ್ಲೆಯಲ್ಲಿ ರಸಗೊಬ್ಬರ ಮತ್ತು ಬಿತ್ತನೆ ಬೀಜಗಳಿಗೆ ಯಾವುದೇ ಕೊರತೆಯಿಲ್ಲ. ರೈತರು ಉತ್ತಮ ಗುಣಮಟ್ಟದ ಬೀಜಗಳನ್ನು ಖರೀದಿಸಿ ಸಕಾಲಕ್ಕೆ ಬಿತ್ತನೆ ಮಾಡಬೇಕು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಸುಮಾ ತಿಳಿಸಿದರು.

ಬೈಟ್ : ಸುಮ ಸಹಾಯಕ ನಿರ್ದೇಶಕರು(೩೦ ಸೆಕೆಂಡ್)

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>